ನಿ-72
ಕ್ರ-113, ಕಂಪ್ಯೂಟರ್

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪಿ.ಹೆಚ್ ಪೂಜಾರ್ ರವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

**ವಿಷಯ:** ಸರ್ಕಾರದ ನೀತಿಯಂತೆ ಜಿಲ್ಲೆಗೊಂದು ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡುವ ಪ್ರಸ್ತಾಪದ ವಿಚಾರದ ಅನ್ವಯ 2018 ರ ಅವಧಿಯಲ್ಲಿ ಬಾಗಲಕೋಟೆಯಲ್ಲಿ ಸರ್ಕಾರಿ ವೈದ್ಯ ಕಾಲೇಜನ್ನು ಸ್ಥಾಪಿಸುವ ಬಗ್ಗೆ ಬಜೆಟ್‌ನಲ್ಲಿ ಸಹ ಪ್ರಸ್ತಾಪಿಸಲಾಗಿತ್ತು. ಇದರ ಸಾಧಕ ಬಾಧಕಗಳ ವೈದ್ಯಕೀಯ ಕಾಲೇಜು ಬಾಗಲಕೋಟೆಯಲ್ಲಿ ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು. ಇದಕ್ಕಾಗಿ ಈ ತನಕ ತೆಗೆದುಕೊಂಡ ಹಾಗೂ ಕಾಲೇಜು ಅನುಷ್ಠಾನದ ಕುರಿತು ಆಗಿರುವ ಕಾರ್ಯಯೋಜನೆ ವಸ್ತುಸ್ಥಿತಿ ವಿವರಗಳ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಬೇಕೆಂಬುದು ಸರ್ಕಾರದ ನೀತಿಯಾಗಿದ್ದು, ಅದರನ್ವಯ 2014-15 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ತುಮಕೂರು, ಚಿತ್ರದುರ್ಗ, ಬಾಗಲಕೋಟೆ, ಚಿಕ್ಕಬಳ್ಳಾಪುರ, ಹಾವೇರಿ ಮತ್ತು ಯಾದಗಿರಿ ಇಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಪ್ರಸ್ತಾಪಿಸಲಾಗಿತ್ತು. ಆಯವ್ಯಯ ಘೋಷಣೆಯಂತೆ ಸರ್ಕಾರದ ಆದೇಶ ಸಂಖ್ಯೆ: ಆಕುಕ 172 ಎಂಪಿಎಸ್ 2014 ದಿನಾಂಕ: 12-06-2014 ರಲ್ಲಿ ತುಮಕೂರು, ಚಿತ್ರದುರ್ಗ, ಚಿಕ್ಕಬಳ್ಳಾಪುರ, ಬಾಗಲಕೋಟೆ, ಹಾವೇರಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿತ್ತು.

ಆದರೆ, 2014-15 ನೇ ಆರ್ಥಿಕ ವರ್ಷಗಳಲ್ಲಿ ಗುಲ್ಬರ್ಗಾ, ಗದಗ, ಕೊಪ್ಪಳ, ಕಾರವಾರ, ಕೊಡಗು ಮತ್ತು ಚಾಮರಾಜನಗರ ಇಲ್ಲಿ 06 ಹೊಸ ವೈದ್ಯಕೀಯ ಕಾಲೇಜುಗಳ ನಿರ್ಮಾಣ ಕಾಮಗಾರಿಗಳಿಗೆ ಅಗತ್ಯವಿರುವ ಅನುದಾನವನ್ನು ಒದಗಿಸಿಕೊಳ್ಳಬೇಕಾಗಿದ್ದುದರಿಂದ, 2014-15 ನೇ ಸಾಲಿನ ಆಯವ್ಯಯದಲ್ಲಿ ಪ್ರಸ್ತಾಪಿಸಲಾಗಿರುವ ವೈದ್ಯಕೀಯ ಕಾಲೇಜುಗಳ ಸ್ಥಾಪನೆ ಕಾರ್ಯವನ್ನು ಮುಂದೂಡಲಾಗಿತ್ತು.

ತದನಂತರದಲ್ಲಿ 2017-18 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಚಿತ್ರದುರ್ಗ, ಬಾಗಲಕೋಟೆ, ಹಾವೇರಿ, ಯಾದಗಿರಿ, ಚಿಕ್ಕಬಳ್ಳಾಪುರ ಮತ್ತು ಚಿಕ್ಕಮಗಳೂರಿನಲ್ಲಿ 06 ಹೊಸ ವೈದ್ಯಕೀಯ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲು ಪ್ರಸ್ತಾಪಿಸಲಾಗಿತ್ತು. ಆದರೆ, ಆರ್ಥಿಕ ಇಲಾಖೆಯು ಸದರಿ ವೈದ್ಯಕೀಯ ಕಾಲೇಜುಗಳ ಸ್ಥಾಪನೆಗಾಗಿ ದೊಡ್ಡ ಪ್ರಮಾಣದಲ್ಲಿ ಅನುದಾನವನ್ನು ಸದರಿ ಆರ್ಥಿಕ ವರ್ಷದಲ್ಲಿ ಒದಗಿಸಲು ಆರ್ಥಿಕ ವಿಸ್ತರತೆ (fiscal space) ಇಲ್ಲದ ಕಾರಣ ಆಯವ್ಯಯದಲ್ಲಿ ಘೋಷಿಸಿರುವ ಮೇಲ್ಕಂಡ 06 ವೈದ್ಯಕೀಯ ಕಾಲೇಜುಗಳಿಗೆ ಅನುಮೋದನೆಯನ್ನು ಕನಿಷ್ಠ ಒಂದು ವರ್ಷ ಮುಂದೂಡುವಂತೆ ತಿಳಿಸಿದ ಕಾರಣ ಸದರಿ ವೈದ್ಯಕೀಯ ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಮುಂದೂಡಲಾಗಿರುತ್ತದೆ.

ತದನಂತರ 2019-20 ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಯೋಜನೆಯನ್ವಯ ಸರ್ಕಾರಿ / ಖಾಸಗಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಸದರಿ ಕಾಲೇಜುಗಳನ್ನು ಪ್ರಾರಂಭಿಸಲು ಕೆಲವು ಮಾನದಂಡಗಳನ್ನು ನೀಡಿದ್ದು ಕೆಳಕಂಡಂತಿರುತ್ತವೆ:

1. District where there is no medical college, either government or private.
2. II. District / Referral Hospitals having bed strength of 200 or more. Where there are two different hospitals for male and female patients at a district headquarters, the combined bed strength of both would be taken into account for this purpose.
3. District/Referral hospitals which are located on a unitary piece of land of 20 acres or in such manner that another piece of land is available within 10 km radius, with a total area of not less than 20 acres and the smaller piece of land not less than 5 acre in size.
4. The location of the proposed 75 new medical colleges in Phase-III will be finalised on Challenge Mode by the Central Government from the districts recommended by the States/UTs, with preference given to aspirational districts and district/referral hospitals having bed strength of 300 or more.

ಈ ಯೋಜನೆ ಅಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲು ಶೇ.60:40 ರ ಅನುಪಾತದಲ್ಲಿ ಒಟ್ಟು ರೂ. 325.00 ಕೋಟಿಗಳ ಅನುದಾನ ಲಭ್ಯವಾಗಲಿದೆ.

ಅದರನ್ವಯ 2019-20 ನೇ ಸಾಲಿನಲ್ಲಿ ಹಾವೇರಿ, ಯಾದಗಿರಿ, ಚಿಕ್ಕಮಗಳೂರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ. ತುಮಕೂರು, ದಾವಣಗೆರೆ, ಬಾಗಲಕೋಟೆ, ಕೋಲಾರ, ದಕ್ಷಿಣ ಕನ್ನಡ, ಉಡುಪಿ, ಬೆಂಗಳೂರು ಗ್ರಾಮಾಂತರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಈಗಾಗಲೇ ಖಾಸಗಿ ವೈದ್ಯಕೀಯ ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿರುವುದರಿಂದ, ಈ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವುದು ಕೇಂದ್ರ ಸರ್ಕಾರದ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯದಲ್ಲಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತಿನ (NMC) ನಿಯಮಗಳನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗುತ್ತಿದೆ. ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ.

ಕೇಂದ್ರದ ನೀತಿ ಆಯೋಗದನ್ವಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸಾರ್ವಜನಿಕ-ಖಾಸಗಿ ಸಹಬಾಗಿತ್ವದಲ್ಲಿ (ಪಿಪಿಪಿ) ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಬಗ್ಗೆ ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಪ್ರಾಥಮಿಕವಾಗಿ ದಾವಣಗೆರೆ, ಉಡುಪಿ, ಕೋಲಾರ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ ಐಡೆಕ್ (iDeCK) ಸಂಸ್ಥೆಯ ಸಹಯೋಗದೊಂದಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿಯೂ ಸಹ ಸಾರ್ವಜನಿಕ-ಖಾಸಗಿ ಸಹಬಾಗಿತ್ವದಲ್ಲಿ (ಪಿಪಿಪಿ) ವೈದ್ಯಕೀಯ ಕಾಲೇಜನ್ನು ಪಾರಂಭಿಸಲು ಉದ್ದೇಶಿಸಲಾಗಿದೆ.

ಸಂಖ್ಯೆ: ಎಂಇಡಿ 557 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು